**ಸದನದಲ್ಲಿ ಉತ್ತರಿಸುವ**
**ಪ್ರಶ್ನೆಗಳ ಪಟ್ಟಿ**
**ಒಟ್ಟು ಪ್ರಶ್ನೆಗಳು – ೧೫**

**ಪಟ್ಟಿ–೧೦**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೇ ಅಧಿವೇಶನ

**(ಮುಂದುವರೆದ ಉಪವೇಶನ)**

**ಗುರುವಾರ, ದಿನಾಂಕ: ೨೩ನೇ ಮಾರ್ಚ್, ೨೦೧೭**

---

**ಸಮೂಹ – IV**

೧. ಮುಖ್ಯಮಂತ್ರಿಗಳು
೨. ಗೃಹ ಸಚಿವರು.
೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು.
೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.

---

## ಪಿ.ಎಲ್.ಡಿ. ಬ್ಯಾಂಕ್ ಅಭಿವೃದ್ಧಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ)–**

೧೩೬ (೧೩೬೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಪಿ.ಎಲ್.ಡಿ. ಬ್ಯಾಂಕ್‌ನ್ನು ಯಾವ ಉದ್ದೇಶಕ್ಕಾಗಿ ಯಾವಾಗ ಸ್ಥಾಪನೆ ಮಾಡಲಾಯಿತು ಇದರ ಕೇಂದ್ರ ಕಚೇರಿ ಎಲ್ಲಿದೆ ; ರಾಜ್ಯದಲ್ಲಿ ಎಷ್ಟು ಶಾಖೆಗಳು ಇವೆ ; ಅವು ಯಾವುವು ; (ವಿವರವಾದ ಮಾಹಿತಿ ಕೊಡುವುದು)

(ಆ) ಪಿ.ಎಲ್.ಡಿ. ಬ್ಯಾಂಕ್‌ಗಳ ಸರ್ವೋತೋಮುಖ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ;

(ಇ) ಪಿ.ಎಲ್.ಡಿ. ಬ್ಯಾಂಕ್‌ಗಳ ಶಾಖೆಗಳಲ್ಲಿ ಪೂರ್ಣ ಪ್ರಮಾಣದ ನೌಕರರು ಇಲ್ಲದೇ ಇರುವುದರಿಂದ ಬ್ಯಾಂಕಿನ ವ್ಯವಹಾರಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಸರ್ಕಾರವು ಯಾವ ಕ್ರಮ ಕೈಗೊಂಡಿದೆ ; ಯಾವ ಕಾಲಮಿತಿಯೊಳಗೆ ಇದಕ್ಕೆ ಪರಿಹಾರ ಒದಗಿಸಲಾಗುವುದು ;

(ಉ) ಪಿ.ಎಲ್.ಡಿ. ಬ್ಯಾಂಕ್‌ನ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಮಂಜೂರಾದ ಹುದ್ದೆಗಳು ಎಷ್ಟು ; (ವಿವರವಾಗಿ ಹುದ್ದೆಯ ಪದನಾಮ, ವೇತನ ಶ್ರೇಣಿ, ಹಾಲಿ ಖಾಲಿ ಇರುವ ಹುದ್ದೆಗಳ ವಿವರವಾದ ಮಾಹಿತಿ ನೀಡುವುದು)

## ಗ್ರಾಮೀಣ ಪ್ರದೇಶಗಳಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಮಾರ್ಗದರ್ಶನ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೭ (೧೭೯೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗ್ರಾಮೀಣ ಪ್ರದೇಶಗಳಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಮಾರ್ಗದರ್ಶನ ನೀಡಿಕೆ ಕುರಿತು ಸರಕಾರವು ರೂಪಿಸಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) ಹೈದ್ರಾಬಾದ್ ಕರ್ನಾಟಕ ಪ್ರದೇಶಗಳಲ್ಲಿ ತೀರಾ ಆರ್ಥಿಕ ಹಿನ್ನಡೆಯಿಂದಾಗಿ ಉದ್ಭವಿಸಿರುವ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ, ಅಕ್ಷರಸ್ಥರು, ಅನಕ್ಷರಸ್ಥರು ಹಾಗೂ ಮಹಿಳೆಯರಿಗೆ ಕೌಶಲ್ಯಾಭಿವೃದ್ಧಿ ಕುರಿತು ಸೂಕ್ತ ಮತ್ತು ಸರಳ ಮಾರ್ಗದರ್ಶನ ಮತ್ತು ಮೂಲಸೌಕರ್ಯ ಹಾಗೂ ಮಾರುಕಟ್ಟೆ ವ್ಯವಸ್ಥೆ ಸೇರಿದಂತೆ ಅರಿವು ನೀಡುವಲ್ಲಿ ಇಲಾಖೆಯವರ ಕ್ರಮಗಳು ಯಾವುವು;

(ಇ) ಗ್ರಾಮೀಣ ಪ್ರದೇಶದಲ್ಲಿ ತಮ್ಮನ್ನು ತಮ್ಮ ವ್ಯಾಪ್ತಿಯಲ್ಲಿಯೇ, ತೊಡಗಿಸಿ ಕೊಂಡಿರುವ ಕೃಷಿ, ತೋಟಗಾರಿಕೆ ಮತ್ತು ತಮ್ಮ ಕುಲವೃತ್ತಿ ಆಧಾರಿತ ಕೆಲಸ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವವರನ್ನು ಕೌಶಲ್ಯಾಭಿವೃದ್ಧಿ ಮಾಡುವ ಮೂಲಕ ಆರ್ಥಿಕ ಚೇತನ ನೀಡುವಲ್ಲಿ, ಸರಕಾರದ ಕ್ರಿಯಾ ಯೋಜನೆಗಳು ಯಾವುವು ; ಮೂರು ವರ್ಷಗಳಲ್ಲಿ ಇಲಾಖೆಯ ಗುರಿ ಮತ್ತು ಸಾಧನೆಯ ವಿವರಗಳೇನು ?

## ಚಾಲಕರಲ್ಲಿ ಪಥ ಚಾಲನೆ ಶಿಸ್ತನ್ನು ಮೂಡಿಸುವ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೧೩೮ (೧೨೫೧) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದಲ್ಲಿ ದಿನೇ ದಿನೇ ಹೆಚ್ಚುತ್ತಿರುವ ಸಂಚಾರ ದಟ್ಟಣೆ, ರಸ್ತೆ ಅಪಘಾತ ನಿಯಂತ್ರಣ ಮೀರಿದ ಸಂಚಾರ ವ್ಯವಸ್ಥೆಯಿಂದ ನಾಗರಿಕರು ದಿನನಿತ್ಯ ಕಷ್ಟಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಆ) ಜಂಕ್ಷನ್‌ಗಳಲ್ಲಿ, ರಸ್ತೆ ಬದಿಗಳಲ್ಲಿ ಸಂಚಾರಿ ಪೋಲೀಸ್‌ನವರು ವಾಹನ ಸವಾರರು ಮತ್ತು ಚಾಲಕರುಗಳಿಂದ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈವರೆಗೂ ಕಾನೂನು ಉಲ್ಲಂಘನೆ ಮಾಡಿದ ಎಷ್ಟು ಜನರ ಲೈಸೆನ್ಸ್ ರದ್ದು ಮಾಡಲಾಗಿದೆ ;

(ಇ) ಸಂಚಾರ ನಿಯಮಗಳನ್ನು ಪಾಲಿಸದೆ ರಸ್ತೆ ತುಂಬಾ ಅಡ್ಡಾದಿಡ್ಡಿ ವಾಹನ ಚಾಲನೆಯಿಂದ ಸಂಚಾರ ದಟ್ಟಣೆ ಇನ್ನಷ್ಟು ಹೆಚ್ಚಾಗುತ್ತಿರುವುದರಿಂದ, ಚಾಲಕರಲ್ಲಿ ಪಥ ಚಾಲನೆ ಶಿಸ್ತನ್ನು ಮೂಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ಒದಗಿಸುವುದು)

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕೆಂಪೇಗೌಡ ಬಡಾವಣೆಗೆ ಜಮೀನು ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೩೯ (೧೨೬೬) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಿಸಲಾಗಿರುವ ಕೆಂಪೇಗೌಡ ಬಡಾವಣೆಗೆ ಎಷ್ಟು ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ;

(ಆ) ಹೀಗೆ ಸ್ವಾಧೀನಪಡಿಸಿಕೊಂಡ ಜಮೀನಿನಲ್ಲಿ ಎಷ್ಟು ಎಕರೆ ಜಮೀನನ್ನು ಡಿ–ನೋಟಿಫೈ ಮಾಡಲಾಗಿದೆ ;

(ಇ) ಹಾಗಿದ್ದಲ್ಲಿ, ಡಿ–ನೋಟಿಫೈ ಮಾಡಲಾದ ಜಮೀನಿನ ಮಾಲೀಕರ ಹೆಸರು ಮತ್ತು ವಿಳಾಸ ನೀಡುವುದು ?

# ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಂರಚನೆ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**
**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**
**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**
**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೪೦ (೧೩೫೩+೧೩೫೪+೧೩೨೮+೧೩೬೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೌಶಲ್ಯ ಅಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆಯು ಎಂದಿನಿಂದ ಅಸ್ಥಿತ್ವಕ್ಕೆ ಬಂದಿರುತ್ತದೆ ;

(ಆ) ಈ ಇಲಾಖೆಯು ಜನರ ಜೀವನೋಪಾಯಕ್ಕೆ ಸಂಬಂಧಿಸಿದಂತೆ ಹಾಕಿಕೊಂಡ ಕಾರ್ಯಕ್ರಮ ಯೋಜನೆಗಳೇನು ; ಸದರಿ ಕಾರ್ಯಕ್ರಮ/ಯೋಜನೆಗಳಿಂದ ಎಷ್ಟು ಫಲಾನುಭವಿಗಳಿಗೆ ಪ್ರಯೋಜನವಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಇಲಾಖೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ನಿಗದಿಪಡಿಸಿರುವ ಇಲ್ಲಿಯವರೆಗಿನ ವಾರ್ಷಿಕ ಅನುದಾನ ಎಷ್ಟು ; (ವಿವರ ನೀಡುವುದು) ಈ ಇಲಾಖೆಯಡಿ ಬರುವ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಗಳು ಯಾವುವು ; ಇದಕ್ಕೆ ಒದಗಿಸಲಾಗಿರುವ ಅನುದಾನ ಎಷ್ಟು ; ಈ ಇಲಾಖೆಗೆ ಒದಗಿಸಿರುವಂತಹ ಸಿಬ್ಬಂದಿ ಮೂಲಭೂತ ಸೌಕರ್ಯಗಳು ಯಾವುವು ; (ವಿವರ ನೀಡುವುದು)

(ಈ) ಸಾರ್ವಜನಿಕರಿಗೆ ಈ ಇಲಾಖೆಯ ಸೌಲಭ್ಯಗಳ ಮಾಹಿತಿಯನ್ನು ಪ್ರಚಾರ ಪಡಿಸಲಾಗುತ್ತಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಉ) ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಹಾಲಿ ಜಾರಿ ಇರುವ ಯೋಜನೆಗಳಾವುವು ; ಇವುಗಳಿಗೆ ಕಳೆದ ೩ ವರ್ಷಗಳಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಒದಗಿಸಲಾಗಿರುವ ಹಣ ಎಷ್ಟು ; ಈ ಪೈಕಿ ಖರ್ಚು ಮಾಡಲಾಗಿರುವ ಹಣ ಎಷ್ಟು ; (ಯೋಜನೆವಾರು ವಿನಿಯೋಗಿಸಲಾಗಿರುವ ಮೊತ್ತದ ಸಹಿತ ಮಾಹಿತಿ ನೀಡುವುದು)

(ಊ) ಈ ಇಲಾಖೆಯಡಿ ಕೆಲಸ ನಿರ್ವಹಿಸುತ್ತಿರುವ ನೌಕರರು ಎಷ್ಟು ; (ವಿವರವಾಗಿ ನೌಕರರ ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ ಪಡೆಯುತ್ತಿರುವ ತಿಂಗಳ ವೇತನ ಸಹಿತ ಮಾಹಿತಿ ಕೊಡುವುದು)

(ಋ) ಸಮಾಲೋಚನ ಶುಲ್ಕದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರು ಎಷ್ಟು ; (ವಿವರವಾಗಿ ಹುದ್ದೆಯ ಪದನಾಮ, ಪಡೆಯುತ್ತಿರುವ ಸಮಾಲೋಚನಾ ಶುಲ್ಕದೊಂದಿಗೆ ಮಾಹಿತಿ ಕೊಡುವುದು)

(ಎ) ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಯಾವ ಯಾವ ಸಂಸ್ಥೆಗಳಿಗೆ ಎಷ್ಟು ಹಣ ನೀಡಲಾಗಿದೆ ? (ಸಂಸ್ಥೆವಾರು ವಿವರವಾದ ಮಾಹಿತಿ ಕೊಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ''ಉದ್ಯೋಗ ವಿನಿಮಯ ಕೇಂದ್ರ'' ನೋಂದಾವಣೆಯಾದ ಪದವೀಧರರ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೧೪೧ (೧೩೩೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪ್ಪನಹಳ್ಳಿ ತಾಲ್ಲೂಕಿನಲ್ಲಿ ''ಉದ್ಯೋಗ ವಿನಿಮಯ ಕೇಂದ್ರ''ದಲ್ಲಿ ನೋಂದಾವಣೆಯಾದ ಪದವೀಧರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇಲಾಖೆಯು ಮೇಲ್ಕಂಡ ಪ್ರದೇಶದಲ್ಲಿ ಕೌಶಲ್ಯ ತರಬೇತಿ ಹಾಗೂ ಉದ್ಯೋಗ ಮೇಳದಲ್ಲಿ ನೋಂದಾವಣೆಯಾದ ಪದವೀಧರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪನಹಳ್ಳಿ ತಾಲ್ಲೂಕಿನಲ್ಲಿ ಜಿಲ್ಲಾವಾರು ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗ ಮೇಳಗಳನ್ನು ಆಯೋಜಿಸುವ ಯೋಜನೆಯು ಸರ್ಕಾರದ ಮುಂದಿದೆಯೇ; ಇದ್ದರೆ, ಜಿಲ್ಲಾವಾರು ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗ ಮೇಳಗಳನ್ನು ಆಯೋಜಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆಯೇ ; ಹಾಗಿದ್ದರೆ, ೨೦೧೬–೧೭ರಲ್ಲಿ ಜಿಲ್ಲಾವಾರು ಹಾಕಿಕೊಂಡಿರುವ ಯೋಜನೆಗಳಾವುವು ?

## ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಟವಾಗುವ ಆಕ್ಷೇಪಾರ್ಹ ಬರಹಗಳ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೪೨ (೧೩೦೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಟವಾಗುವ ಆಕ್ಷೇಪಾರ್ಹ ಬರಹಗಳ ಮೇಲೆ ನಿಗಾ ಇಡಲು 'ಸೋಷಿಯಲ್ ಮೀಡಿಯಾ ಮಾನಿಟರಿಂಗ್ ಅಂಡ್ ಟೆಕ್ನಿಕಲ್ ಸೆಲ್' ಅನ್ನು ರಾಜ್ಯದ ಕಲಬುರಗಿ ಪೊಲೀಸರು ಸ್ಥಾಪಿಸಿರುವುದು ನಿಜವೇ ;

(ಆ) ಈ ಸೆಲ್‌ನ ಕರ್ತವ್ಯಗಳೇನು ; ಇದರಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳೆಷ್ಟು ; ಈ ಸೆಲ್‌ನಿಂದಾಗಿ ಜನಸಾಮಾನ್ಯರಿಗೆ ಆಗುತ್ತಿರುವ ಪ್ರಯೋಜನಗಳೇನು ;

(ಇ) ರಾಜ್ಯದ ಇತರ ಜಿಲ್ಲೆಗಳಲ್ಲೂ ಇದೇ ರೀತಿಯ ಸೆಲ್‌ಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೇ ?

## ಹೊಸ ಬಡಾವಣೆಗಳ ನಿರ್ಮಾಣ ಮತ್ತು ನಿವೇಶನ ಹಂಚಿಕೆ ಬಗ್ಗೆ

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪೩ (೧೨೫೪) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಮನಗರ–ಚನ್ನಪಟ್ಟಣ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಹೊಸ ಬಡಾವಣೆಗಳನ್ನು ನಿರ್ಮಿಸಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಹೊಸದಾಗಿ ನಿರ್ಮಾಣಗೊಳ್ಳುತ್ತಿರುವ ಬಡಾವಣೆಗಳಲ್ಲಿ ಸಾರ್ವಜನಿಕರಿಗೆ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲು ಉದ್ದೇಶಿಸಲಾಗಿದೆ ;

(ಇ) ಕಳೆದ ೩ ವರ್ಷಗಳಲ್ಲಿ ರಾಮನಗರ–ಚನ್ನಪಟ್ಟಣ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕೈಗೊಳ್ಳಲಾದ ಅಭಿವೃದ್ಧಿ ಕಾಮಗಾರಿಗಳಾವುವು;

(ಈ) ಈ ಕಾಮಗಾರಿಗಳಿಗಾಗಿ ಸರ್ಕಾರ ನಿಗದಿಪಡಿಸಿ, ಬಿಡುಗಡೆ ಮಾಡಿದ ಹಣವೆಷ್ಟು ; ಖರ್ಚು ಮಾಡಲಾದ ಹಣವೆಷ್ಟು ; ಈ ಕಾಮಗಾರಿಗಳ ಇತ್ತೀಚಿನ ಪ್ರಗತಿಯೇನು ? (ಸಂಪೂರ್ಣ ವಿವರ ನೀಡುವುದು)

## ಐ.ಟಿ.ಐ. ಕಾಲೇಜುಗಳ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೪ (೧೩೮೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆಯಲ್ಲಿರುವ ಸರ್ಕಾರಿ ಮತ್ತು ಖಾಸಗಿ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಕಾರ್ಯನಿರ್ವಹಿಸುತ್ತಿರುವ ಸ್ಥಳಗಳೊಂದಿಗೆ ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಕಳೆದ ಸಾಲಿನಲ್ಲಿ ಎಷ್ಟು ಐ.ಟಿ.ಐ. ಕಾಲೇಜುಗಳಿಗೆ ಮಂಜೂರಾತಿ ನೀಡಲಾಗಿದೆ ;

(ಇ) ಎಷ್ಟು ಕಾಲೇಜುಗಳಿಗೆ ಎಲ್ಲೆಲ್ಲಿ ಅನುಮತಿ ನೀಡಲಾಗಿದೆ ? (ವಿವರ ನೀಡುವುದು)

## ಬಿಡಿಎ ನಿರ್ಮಾಣದ ಅರ್ಕಾವತಿ ಬಡಾವಣೆ (ರಾಚೇನಹಳ್ಳಿ)ಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೪೫ (೧೩೧೩) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಉತ್ತರ, ಬ್ಯಾಟರಾಯನಪುರ, ವಾರ್ಡ್ ನಂ.೬ರಲ್ಲಿ ಬರುವ ರಾಚೇನಹಳ್ಳಿಯ ಅರ್ಕಾವತಿ ಬಡಾವಣೆಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿವೇಶನಗಳನ್ನು ಹಂಚಿಕೆ ಮಾಡಿರುವುದು ನಿಜವೇ ; ಯಾವಾಗ ಹಂಚಿಕೆ ಮಾಡಲಾಯಿತು ; ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಯಿತು ;

(ಆ) ಸದರಿ ಬಡಾವಣೆಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಯಾವ ಯಾವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಕೊಡಬೇಕಾಗಿದೆ ; ಯಾವ ಸೌಕರ್ಯಗಳನ್ನು ಕಲ್ಪಿಸಿಕೊಡಲಾಗಿದೆ ;

(ಇ) ಸದರಿ ಬಡಾವಣೆಯಲ್ಲಿ ಟ್ರಾನ್ಸ್‌ಫಾರ್ಮರ್ ಮತ್ತು ವಿದ್ಯುತ್ ಕಂಬಗಳನ್ನು ಅಳವಡಿಸಬೇಕಾಗಿರುವುದು ಬಿಡಿಎ ಜವಾಬ್ಧಾರಿಯೇ ;

(ಈ) ಸದರಿ ಬಡಾವಣೆಯಲ್ಲಿ ಟ್ರಾನ್ಸ್‌ಫಾರ್ಮರ್ ಅಳವಡಿಸದೆ ಇರುವುದರಿಂದ, ಹಲವು ವರ್ಷಗಳಿಂದ ಕಮರ್ಷಿಯಲ್ ಲೆಕ್ಕದಲ್ಲಿ ವಿದ್ಯುತ್ ದರ ಪಾವತಿಸುತ್ತಿದ್ದು, ಅಲ್ಲಿ ವಾಸ ಮಾಡುವ ನಿವಾಸಿಗಳಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸದರಿ ಬಡಾವಣೆಯಲ್ಲಿ ಟ್ರಾನ್ಸ್‌ಫಾರ್ಮರ್ ಅಳವಡಿಕೆ ಹಾಗೂ ಮತ್ತಿತರ ಮೂಲಭೂತ ಸೌಕರ್ಯಗಳನ್ನು ಸರ್ಕಾರದ ವತಿಯಿಂದ ಯಾವಾಗ ಕಲ್ಪಿಸಲಾಗುವುದು ? (ವಿವರ ನೀಡುವುದು)

**ನಾಗರಿಕ ಸ್ನೇಹಿ ಇ–ಆಡಳಿತ ಮತ್ತು ವೆಬ್‌ಸೈಟ್ ನಿರ್ವಹಣೆ ಕುರಿತು**

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೧೪೬ (೧೩೯೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರವು ಕರ್ನಾಟಕ ರಾಜ್ಯದಲ್ಲಿ ನಾಗರಿಕ ಸ್ನೇಹಿ ಇ–ಆಡಳಿತವನ್ನು ಸಂಪೂರ್ಣವಾಗಿ ಜಾರಿಗೊಳಿಸಿದೆಯೇ; ಜಾರಿಗೊಳಿಸಿದ್ದಲ್ಲಿ, ೨೦೧೬–೧೭ನೇ ಸಾಲಿನಲ್ಲಿ ಇ–ಆಡಳಿತ ಯೋಜನೆಗೆ ಒಟ್ಟು ಎಷ್ಟು ಮೊತ್ತವನ್ನು ಖರ್ಚು ಮಾಡಲಾಗಿದೆ ;

(ಆ) ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು ವೆಬ್‌ಸೈಟ್ ಖಾತೆಯನ್ನು ಹೊಂದಿರುತ್ತವೆಯೇ ; ಹೊಂದದೇ ಇದ್ದಲ್ಲಿ, ಕಾರಣವೇನು ;

(ಇ) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಕಛೇರಿ ಮತ್ತು ಜಿಲ್ಲಾ ಪಂಚಾಯಿತಿಗಳು ವೆಬ್‌ಸೈಟ್ ಖಾತೆಯನ್ನು ಹೊಂದಿರುತ್ತವೆಯೇ ; ವೆಬ್‌ಸೈಟ್ ಖಾತೆಯನ್ನು ಹೊಂದಲು ರಾಜ್ಯ ಸರ್ಕಾರದ ವತಿಯಿಂದ ಯಾವುದೇ ನಿರ್ದಿಷ್ಟ ದಿನಾಂಕವನ್ನು ನಿಗದಿಪಡಿಸಲಾಗಿದೆಯೇ ; ವೆಬ್‌ಸೈಟ್ ಖಾತೆ ಮೂಲಕ ಮಾಹಿತಿ ನೀಡದ ಇಲಾಖೆಗಳ ಮೇಲೆ ರಾಜ್ಯ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿರುತ್ತದೆ ;

(ಈ) ರಾಜ್ಯದ ಸರ್ಕಾರಿ ಇಲಾಖೆಗಳಲ್ಲಿ ವೆಬ್‌ಸೈಟ್ ಖಾತೆ ಹೊಂದಿರುವ ಇಲಾಖೆಗಳ ವೆಬ್‌ಸೈಟ್ ನಿರ್ವಹಣೆಗೆ ಎಷ್ಟು ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆ ; ಸದರಿ ಸಂಸ್ಥೆಗಳಿಗೆ ಎಷ್ಟು ವಾರ್ಷಿಕ ನಿರ್ವಹಣಾ ವೆಚ್ಚ

ಪಾವತಿ ಮಾಡಲಾಗಿರುತ್ತದೆ ; ದುಬಾರಿ ನಿರ್ವಹಣಾ ವೆಚ್ಚಗಳಲ್ಲಿ ವಸೂಲಿ ಮಾಡುತ್ತಿರುವ ಸಂಸ್ಥೆಯ ಮೇಲೆ ಸರ್ಕಾರ ಯಾವ ರೀತಿಯ ನಿಯಂತ್ರಣ ಹೊಂದಿರುತ್ತದೆ ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಬಹುಮಹಡಿ ಕಟ್ಟಡಗಳ ಗುಣಮಟ್ಟ ನಿಯಂತ್ರಣದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೭ (೧೨೯೦) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ಮಿಸಲಾಗಿರುವ ಮತ್ತು ನಿರ್ಮಿಸಲಾಗುತ್ತಿರುವ ಬಹುಮಹಡಿ ವಾಣಿಜ್ಯ ಸಂಕೀರ್ಣಗಳು ಮತ್ತು ವಸತಿ ಸಮುಚ್ಚಯಗಳನ್ನು ನಿರ್ಮಿಸುವಾಗ ಅವುಗಳ ಗುಣಮಟ್ಟ ನಿಯಂತ್ರಣ (Quality Control) ಕ್ಕೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಿಧಿಸಿರುವ ಮಾರ್ಗ ಸೂಚಿಗಳೇನು ; ಗುಣಮಟ್ಟ ನಿಯಂತ್ರಣಕ್ಕೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ತೆಗೆದುಕೊಳ್ಳುವ ಕ್ರಮಗಳೇನು ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಕಳಪೆ ಗುಣಮಟ್ಟದ ಬಹುಮಹಡಿ ವಾಣಿಜ್ಯ ಸಂಕೀರ್ಣ ಮತ್ತು ವಸತಿ ಸಮುಚ್ಚಯಗಳಲ್ಲಿ ವಾಣಿಜ್ಯ ಮಳಿಗೆಗಳನ್ನು ಮತ್ತು ವಾಸ್ತವ್ಯದ ಮನೆಗಳನ್ನು ಖರೀದಿಸುವ ಅಮಾಯಕರ ಜೀವ ಮತ್ತು ಅವರ ಸ್ವತ್ತುಗಳ ರಕ್ಷಣೆಯ, ಬದ್ಧತೆ, ಹೊಣೆ ಸರ್ಕಾರದಲ್ಲವೇ ; ಹಾಗಿದ್ದಲ್ಲಿ, ಇಂತಹ ಕಳಪೆ ಗುಣಮಟ್ಟದ ಬಹುಮಹಡಿಗಳ, ವಾಣಿಜ್ಯ ಸಂಕೀರ್ಣ ಹಾಗೂ ವಸತಿ ಸಮುಚ್ಚಯಗಳ ನಿರ್ಮಾತೃಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗುವುದು ; ಇಲ್ಲವಾದಲ್ಲಿ, ಕಾರಣವೇನು ;

(ಇ) ಕಳೆದ ೫ ವರ್ಷಗಳಲ್ಲಿ ಕಳಪೆ ಗುಣಮಟ್ಟದ ನಿರ್ಮಾಣದಡಿಯಲ್ಲಿ ಎಷ್ಟು ಬಹುಮಹಡಿ, ವಾಣಿಜ್ಯ ಸಂಕೀರ್ಣ ಹಾಗೂ ವಸತಿ ಸಮುಚ್ಚಯಗಳ ಮೇಲೆ ಕ್ರಮಕೈಗೊಳ್ಳಲಾಗಿದೆ ; ಮತ್ತು ತೆಗೆದುಕೊಂಡ ಕ್ರಮಗಳೇನು ? (ವರ್ಷಾವಾರು, ಪ್ರಕರಣವಾರು ವಿವರ ನೀಡುವುದು)

## ಕರ್ನಾಟಕ ವಿಧಾನಮಂಡಲ ನೌಕರರ ಗೃಹ ನಿರ್ಮಾಣ ಸಂಘದ ನಿವೇಶನ ಹಂಚಿಕೆ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೧೪೮ (೧೩೯೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ವಿಧಾನ ಮಂಡಲ ನೌಕರರ ಗೃಹ ನಿರ್ಮಾಣ ಸಂಘವು, ವಿಧಾನಮಂಡಲದ ಎಷ್ಟು ನೌಕರರುಗಳಿಗೆ ನಿವೇಶನ ಹಂಚಿಕೆ ಮಾಡಬೇಕಾಗಿರುತ್ತದೆ ; (ವಿವರ ನೀಡುವುದು)

(ಆ) ನಿವೇಶನ ರಹಿತ ನೌಕರರುಗಳು ೨೦೦೪–೦೫ ರಲ್ಲಿ ಸಾಲ ಮಾಡಿ ನಿವೇಶನಕ್ಕೆ ಹಣ ಪಾವತಿಸಿದ್ದರೂ, ಇದುವರೆವಿಗೂ ನಿವೇಶನ ಹಂಚಿಕೆ ಮಾಡದೇ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಸಂಘದ ಆಡಳಿತ ಮಂಡಳಿಯ ಮೇಲೆ ಕೋಟಿಗಟ್ಟಲೆ ಹಣ ದುರುಪಯೋಗ ವಂಚನೆ ಮೇರೆಗೆ ಸಹಕಾರ ಇಲಾಖೆಯ ನಿಯಮ ೬೪ ಮತ್ತು ೬೮ ರಡಿಯಲ್ಲಿ ವಿಚಾರಣಾ ಆರೋಪ ಸಾಬೀತಾಗಿದ್ದರೂ ಸಹ, ಇದುವರೆವಿಗೂ ಇಲಾಖೆ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು; ಇದು ಇಲಾಖಾಧಿಕಾರಿಗಳ ಭ್ರಷ್ಟಾಚಾರವನ್ನು ಪ್ರತಿಬಿಂಬಿಸುವುದಿಲ್ಲವೆ ;

(ಈ) ಸದರಿ ಸಂಘದ ಆಡಳಿತ ಮಂಡಳಿಯವರು ಒಳಸಂಚು ಮಾಡಿ ಅಕ್ರಮವಾಗಿ ಜ್ಯೇಷ್ಠತಾ ಪಟ್ಟಿಯನ್ನು ಸಿದ್ದಪಡಿಸಿ, ಅನುಮೋದನೆ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸದಸ್ಯರ ಹೆಸರು, ವಿಳಾಸಗಳೊಂದಿಗೆ ವಿವರ ನೀಡುವುದು)

(ಉ) ಸದರಿ ಸಿದ್ಧಪಡಿಸಿರುವ ಜ್ಯೇಷ್ಠತಾ ಪಟ್ಟಿಯಲ್ಲಿ ನೈಜ ಸದಸ್ಯರನ್ನು ಹೊರತುಪಡಿಸಿ, ಕೇವಲ ಸಹ ಸದಸ್ಯರಿಗೆ ಮತ್ತು ತಮಗೆ ಬೇಕಾದ ನಿಕಟವರ್ತಿಗಳಿಗೆ ಮಾತ್ರವೆ ನಿವೇಶನ ಹಂಚಲು ಸಂಚು ಮಾಡಿರುವುದು ನಿಜವೇ ;

(ಊ) ಈ ಪ್ರಕ್ರಿಯೆಯಿಂದಾಗಿ ನಿವೇಶನಕ್ಕೆ ಜಾತಕ ಪಕ್ಷಿಯಂತೆ ಕಾಯುತ್ತಿರುವ ವಿಧಾನ ಮಂಡಲ ನಿವೇಶನ ರಹಿತ ನೌಕರರುಗಳಿಗೆ ಅನೇಕ ವರ್ಷಗಳು ಕಳೆದುಹೋದರೂ ನಿವೇಶನ ಸಿಗದೆ, ಅನ್ಯಾಯಕ್ಕೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಖ) ಹಾಗಿದ್ದಲ್ಲಿ, ವಿಧಾನಮಂಡಲದ ನಿವೇಶನ ರಹಿತ ನೌಕರರುಗಳಿಗೆ ಕೂಡಲೇ ನಿವೇಶನ ದೊರಕಿಸಿಕೊಡಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು? (ವಿವರ ನೀಡುವುದು)

## ರೈತರ ಮೇಲಿನ ದಾವೆಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೪೯ (೧೩೭೦+೧೩೧೨+೧೩೦೪) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾವೇರಿ ನ್ಯಾಯ ಮಂಡಳಿಯು ಇತ್ತೀಚೆಗೆ ನೀಡಿದ್ದ ಮಧ್ಯಂತರ ಆದೇಶವನ್ನು ವಿರೋಧಿಸಿ ರಾಜ್ಯಾದ್ಯಂತ ರೈತರು ಪ್ರತಿಭಟನೆ ನಡೆಸುತ್ತಿದ್ದು ರೈತರ ಮೇಲೆ ದಾವೆಗಳನ್ನು ಹೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಹದಾಯಿ ಹೋರಾಟದ ಸಂದರ್ಭದಲ್ಲಿ ಕಳೆದ ವರ್ಷ ನಡೆದ ಯಮನೂರು ಹಾಗೂ ಸುತ್ತಮುತ್ತಲ ಗ್ರಾಮಗಳ ರೈತರ ವಿರುದ್ಧ ದಾಖಲಿಸಿರುವ ಮೊಕದ್ದಮೆಗಳೆಷ್ಟು ; (ವಿವರ ನೀಡುವುದು) ಎಷ್ಟು ಜನ ರೈತರ ವಿರುದ್ಧ ಮೊಕದ್ದಮೆ ದಾಖಲಿಸಲಾಗಿದೆ ; ಪ್ರಸ್ತುತ ಅವರುಗಳು ಯಾವ ರೀತಿಯ ಶಿಸ್ತು ಕ್ರಮವನ್ನು ಅನುಭವಿಸುತ್ತಿದ್ದಾರೆ ;

(ಇ) ಹಾಗಿದ್ದಲ್ಲಿ, ಪ್ರತಿಭಟನೆ ಮಾಡುತ್ತಿದ್ದ ರೈತರ ವಿರುದ್ಧ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆಯಾದಾಗ ಯಾವ ಯಾವ ಕಾಯ್ದೆಗಳಡಿ ದಾವೆಗಳನ್ನು ಮಾಡಲಾಗಿದೆ ; (ವಿವರಗಳನ್ನು ನೀಡುವುದು)

(ಈ) ಪ್ರತಿಭಟನಾ ರೈತರ ಮೇಲೆ ಹೂಡಿರುವ ದಾವೆಗಳನ್ನು ಹಿಂಪಡೆಯುವುದಾಗಿ ಸರ್ಕಾರ ಭರವಸೆ ನೀಡಿರುವುದು ನಿಜವೇ ; ಹಾಗಿದ್ದಲ್ಲಿ, ಇದುವರೆವಿಗೂ ರೈತರ ವಿರುದ್ಧ ಹೂಡಿರುವ ಎಷ್ಟು ದಾವೆಗಳನ್ನು ಹಿಂಪಡೆಯಲಾಗಿದೆ ; ಹಿಂಪಡೆದುಕೊಂಡ ನಿದರ್ಶನಗಳಿವೆಯೇ ; (ವಿವರಗಳನ್ನು ನೀಡುವುದು)

(ಉ) ಸರ್ಕಾರ ಇನ್ನು ಎಷ್ಟು ದಾವೆಗಳನ್ನು ಹಿಂಪಡೆಯಬೇಕಾಗಿದೆ ; ಹಿಂಪಡೆಯದೆ ಇರಲು ಕಾರಣಗಳೇನು ; ಈಗ ಯಾವ ಹಂತದಲ್ಲಿದೆ ? (ವಿವರಗಳನ್ನು ನೀಡುವುದು)

**ಬೆಂಗಳೂರು ನಗರದಲ್ಲಿ ಮಾದಕವಸ್ತು ಮಾರಾಟವಾಗುತ್ತಿರುವ ಬಗ್ಗೆ**

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

**ಶ್ರೀ ಲಹರ್‌ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೦ (೧೩೭೩+೧೩೬೮+೧೨೩೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದಲ್ಲಿ ಮಾದಕವಸ್ತು ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ದಂಧೆಯು ಹೆಚ್ಚಾಗಿ ಯಾವ ಮಾರ್ಗಗಳ ಮುಖಾಂತರ ನಡೆಯುತ್ತಿದೆ ;

(ಆ) ಕಳೆದ ಮೂರು ವರ್ಷಗಳಿಂದ ಎಷ್ಟು ಜನ ವಿದೇಶಿಯರನ್ನು ಮಾದಕ ವಸ್ತುಗಳ ಮಾರಾಟದ ಹಿನ್ನೆಲೆಯಲ್ಲಿ ಬಂಧಿಸಲಾಗಿರುತ್ತದೆ ; (ವಿವರ ನೀಡುವುದು) ದಾಖಲಾದ ಪ್ರಕರಣಗಳೆಷ್ಟು ; ಕೈಗೊಂಡ ಕ್ರಮಗಳೇನು ;

(ಇ) ಬೆಂಗಳೂರಿನ ಹೊರವಲಯುದ ಬಾಣಸವಾಡಿ, ಹೆಣ್ಣೂರು, ಸೋಲದೇವನಹಳ್ಳಿ, ಹೊರಮಾವು, ಟಿ.ಸಿ.ಪಾಳ್ಯ, ಬೈರತಿ, ಕೆ. ಚನ್ನಸಂದ್ರ, ಕೊತ್ತನೂರು, ಕಮ್ಮನಹಳ್ಳಿ ಈ ಪ್ರದೇಶಗಳಲ್ಲಿ ಮಾದಕ ವಸ್ತುಗಳಾದ ಕೋಕೆನ್, ಎಂಡಿಎಂ, ಗಾಂಜಾ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹೈಟೆಕ್ ಡ್ರಗ್ಸ್ ದಂಧೆಯಿಂದ ಡಾರ್ಕ್ ವೆಬ್‌ಸೈಟ್ ಬಳಕೆ ಫೇಸ್‌ಬುಕ್ ಪೇಜ್ ಮೂಲಕ ಆರ್ಡರ್ ಮಾಡಿ ಕೋರಿಯರ್ ಮೂಲಕ ತಲುಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಮಾದಕವಸ್ತುಗಳ ಮಾರಾಟಕ್ಕೆ ಕಡಿವಾಣ ಹಾಕಲು ಸರ್ಕಾರ ಯಾವ ರೀತಿಯ ಕ್ರಮವನ್ನು ಕೈಗೊಂಡಿದೆ ;

(ಊ) ವೀಸಾ ಅವಧಿ ಮುಗಿದಿರುವ ವಿದೇಶಿಯರನ್ನು ಅವರ ದೇಶಕ್ಕೆ ಕಳುಹಿಸಿಕೊಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 1143, ಪ್ರತಿಗಳು 1500